ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 11–12–2020

# ಮಾಧ್ಯಮ ಆಮಂತ್ರಣ

1) ಪತ್ರಿಕಾಗೋಷ್ಠಿ

ಮೆಗಾ ಲೋಕ್ ಅದಾಲತ್

ಶ್ರೀ ಅರವಿಂದ್‌ಕುಮಾರ್
ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ
ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರು

ದಿನಾಂಕ : 12–12–2020, ಶನಿವಾರ , ಸಮಯ : ಬೆಳಿಗ್ಗೆ 11–00 ಗಂಟೆಗೆ
ಸ್ಥಳ : ನ್ಯಾಯದೇಗುಲ ಕಟ್ಟಡ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಸಭಾಂಗಣ, ಮೊದಲನೇ ಮಹಡಿ, ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು

**2) Press Conference:**
**Mega Lok Adalat**

**Sri Aravind Kumar, Judge, High Court of Karnataka and Executive Chairman, Karnataka Statge Legal Services Authority**

**Date : 12-12-2020 Saturday Time : 11-00 A.M.**

**Venue : Conference Hall, Karnataka State Legal Services Authority “Nyaya Degula, 1st Floor, H. Siddaiah Road, Bengaluru-27**

# ಪತ್ರಿಕಾ ಪ್ರಕಟಣೆ

## “ಭೂ ಸುಧಾರಣೆ ಕಾಯಿದೆ ತಿದ್ದುಪಡಿ–ಉಳ್ಳವರು ಸಾವಿರಾರು ಎಕ್ಕರೆ ಖರೀದಿಸಲು ಅವಕಾಶವಿಲ್ಲ”–ಸಚಿವ ಅಶೋಕ್

ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ): ರಾಜ್ಯ ಸರ್ಕಾರ ಇತ್ತೀಚಿಗೆ ಜಾರಿಗೆ ತಂದಿರುವ ಕರ್ನಾಟಕ ಭೂಸುಧಾರಣೆಗಳ ವಿಧೇಯಕ ತಿದ್ದುಪಡಿ–2020, ಎಪಿಎಮ್‌ಸಿ ತಿದ್ದುಪಡಿ ಮತ್ತು ಗೋಹತ್ಯೆ ನಿಷೇಧ ಕಾಯಿದೆಯಿಂದ ರೈತರಿಗೆ ಯಾವುದೇ ತೊಂದರೆ ಇರುವುದಿಲ್ಲ, ಇಲ್ಲ–ಸಲ್ಲದ ವಿಷಯಗಳಿಗೆ ಭಯ ಪಡುವ ಅವಶ್ಯಕತೆ ಇಲ್ಲ, ಸರ್ಕಾರ ರೈತರ ಹಿತ ಕಾಯಲು ಮತ್ತು ಭವಿಷ್ಯದಲ್ಲಿ ರೈತರ ಜೀವನವನ್ನು ಸದೃಢಗೊಳಿಸುವಂತ ಕಾನೂನುಗಳಿವು ಎಂದು ಕಂದಾಯ ಸಚಿವ ಆರ್.ಅಶೋಕ್ ಅವರು ತಿಳಿಸಿದರು.

ಇಂದು ವಿಧಾನಸೌಧದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು ಭೂ ಸುಧಾರಣೆಗಳ ವಿಧೇಯಕ ತಿದ್ದುಪಡಿ–2020 ರಲ್ಲಿ ರೈತರಿಗೆ ಸಹಾಯವಾಗುವಂತಹ ಅಂಶಗಳನ್ನು ಸೇರಿಸಲಾಗಿದ್ದು, ಈ ಕುರಿತು ರೈತರು ಅರ್ಥ ಮಾಡಿಕೊಳ್ಳಬೇಕು. 79–ಎ–ಬಿ ಅಡಿಯಲ್ಲಿ ಭತ್ತವನ್ನು ವರ್ಷಕ್ಕೆ ಎರಡು ಬೆಳೆ ಬೆಳೆಯುವ ಭೂಮಿಯನ್ನು ಕೃಷಿಯೇತರರ ಕನಿಷ್ಟ 5 ಜನರ ಕುಟುಂಬವೊಂದು ಗರಿಷ್ಠ 13 ಎಕ್ಕರೆಯನ್ನು ಖರೀದಿಸಬಹುದಾಗಿದೆ. ಅದೇ ರೀತಿಯಲ್ಲಿ ವರ್ಷಕ್ಕೆ ಒಂದು ಬೆಳೆಯ ಭೂಮಿಯನ್ನು ಗರಿಷ್ಠ 15 ಎಕ್ಕರೆ ಮತ್ತು ನೀರಾವರಿ ಭೂಮಿಯನ್ನು ಗರಿಷ್ಠ 25 ಎಕ್ಕರೆ ಮಾತ್ರ ಖರೀದಿಸಬಹುದಾಗಿದ್ದು, ಅದನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಸಲು ಅವಕಾಶ ಇರುವುದಿಲ್ಲ ಎಂಬ ಅಂಶವನ್ನು ನೂತನ ತಿದ್ದುಪಡಿಯಲ್ಲಿ ಅಳವಡಿಸಲಾಗಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರ ಭೂಮಿಯನ್ನು ಪರಿಶಿಷ್ಟರು ಮಾತ್ರ ಖರೀದಿಸಬಹುದಾಗಿದ್ದು ಇತರ ಜಾತಿಯ ರೈತರು ಅಥವಾ ರೈತರೇತರರು ಖರೀದಿಸುವಂತಿಲ್ಲ. ಉಳುವವನೇ ಭೂಮಿ ಒಡೆಯ ಕಾಯಿದೆ ಅದೇ ರೀತಿಯಲ್ಲಿ ಮುಂದುವರೆಯಲಿದ್ದು, ಅದಕ್ಕೆ ಯಾವುದೇ ತೊಂದರೆ ಇರುವುದಿಲ್ಲ. ಈ ನೂತನ ತಿದ್ದುಪಡಿಯಿಂದ ರೈತರಿಗಿದ್ದ ಬಂಧನದ ಸಂಕೋಲೆಯಿಂದ ಸ್ವತಂತ್ರರನ್ನಾಗಿ ಮಾಡಲಾಗಿದೆ ಎಂದು ಹೇಳಿದರು.

79–ಎಬಿ ಅಡಿಯಲ್ಲಿ ಮಧ್ಯವರ್ತಿಗಳ ಆವಳಿ ಇತ್ತು ಅದನ್ನು ಇದರಿಂದ ಸಂಪೂರ್ಣವಾಗಿ ನಾಶ ಮಾಡಬಹುದಾಗಿದೆ. ಕೃಷಿಯನ್ನು ಮತ್ತು ಕೈಗಾರಿಕೆಗಳನ್ನು ಒಟ್ಟಾಗಿ ಬೆಳೆಸುವ ಅವಶ್ಯಕತೆ ಪ್ರಸ್ತುತ ದಿನಮಾನಗಳಲ್ಲಿ ಅವಶ್ಯಕತೆ ಇದೆ. ಆಯಾ ಪ್ರಾಂತ್ಯವಾರು ಬೆಳೆಯುವ ಬೆಳೆಗಳಿಗೆ ಅನುಸಾರವಾಗಿ ಕೈಗಾರಿಕೆಗಳನ್ನು ಆರಂಭಿಸಿದಾಗ ಸಾಗಾಣಿಕೆಗೆ ತಗುಲುವ ವೆಚ್ಚವನ್ನು ಉಳಿಸಬಹುದಾಗಿದೆ. ರಾಜ್ಯದಲ್ಲಿ ಇಲ್ಲಿಯವರೆಗೆ ಕೇವಲ ಶೇ 0.86% ಭೂಮಿಯನ್ನು ಕೈಗಾರಿಕೆ ಉದ್ದೇಶಗಳಿಗಾಗಿ ಬಳಸಿಕೊಳ್ಳಲಾಗಿದ್ದು, ಶೇ 2% ರಷ್ಟು ಕೃಷಿಯೇತರ ಭೂಮಿಯನ್ನು ಕೈಗಾರಿಕೆಗಳಿಗೆ ನೀಡಲು ಉದ್ದೇಶಿಸಲಾಗಿದ್ದು ಇದರಿಂದ ರಾಜ್ಯದಲ್ಲಿ 1.5 ಕೋಟಿ ಉದ್ಯೋಗ ಸೃಷ್ಟಿಯಾಗಲಿದೆ ಎಂದು ತಿಳಿಸಿದರು.

ದೇಶದಲ್ಲಿಯೇ ಅತಿ ಹೆಚ್ಚು ಕೃಷಿ ಉತ್ಪನ್ನಗಳನ್ನು ಇತರೆ ದೇಶಗಳಿಗೆ ರಫ್ತು ಮಾಡುವುದರಲ್ಲಿ ಗುಜರಾತ್ ಅಗ್ರಸ್ಥಾನದಲ್ಲಿದ್ದು ಆ ರಾಜ್ಯವೊಂದೇ ಶೇ 18%, ಮಹಾರಾಷ್ಟ್ರ ಶೇ 8% ಹಾಗೂ ನಮ್ಮ ರಾಜ್ಯ ಶೇ 5%ರಷ್ಟನ್ನು ಮಾತ್ರ ರಫ್ತು ಮಾಡುತ್ತಿದ್ದು, ಇದನ್ನು ಹೆಚ್ಚು ಮಾಡಿ ರಾಜ್ಯದ ಆರ್ಥಿಕ ಪರಿಸ್ಥಿತಿ ಮತ್ತು ಉದ್ಯೋಗ ಸೃಷ್ಟಿಯ ಯೋಜನೆ ಸರ್ಕಾರಕ್ಕಿದೆ. ಹೆಚ್ಚಿನ ಯುವಕರು ಭವಿಷ್ಯದಲ್ಲಿ ಕೃಷಿ ಚಟುವಟಿಕೆಗಳಿಗೆ ಮರಳುವಂತ ವಾತಾವರಣವನ್ನು ರಾಜ್ಯದಲ್ಲಿ ಸೃಷ್ಟಿಸಲಾಗುವುದು ಎಂದು ಹೇಳಿದರು.

ಗೋಹತ್ಯೆ ನಿಷೇಧ ಕಾಯಿದೆಗೆ ಸಂಬಂಧಿಸಿದಂತೆ ಮಾತನಾಡಿದ ಸಚಿವರು ತಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ರಾಜ್ಯದಲ್ಲಿ ಗೋಹತ್ಯೆ ಕಾಯಿದೆಯನ್ನು ಜಾರಿಗೆ ತರಲು ಉದ್ದೇಶಿಸಲಾಗಿದೆ. ಈಗಾಗಲೇ ಕಳೆದ ವಿಧಾನಸಭೆ ಅಧಿವೇಶನದಲ್ಲಿ ಕಾಯಿದೆಯನ್ನು ಮಂಡಿಸಲಾಗಿದ್ದು, ಶೀಘ್ರದಲ್ಲಿ ಕಾಯಿದೆ ರೂಪಕ್ಕೆ ಅಂತಿಮವಾಗಿ ತರಲಾಗುವುದು. ಇದರಿಂದ ರೈತರಿಗಾಗುವ ಸಾಧಕ-ಭಾದಕಗಳನ್ನು ಪರಿಶೀಲಿಸಿ ತಾಲ್ಲೂಕಿಗೊಂದು ಗೋ ಶಾಲೆಗಳನ್ನು ತೆರೆಯಲು ಯೋಜಿಸಲಾಗಿದೆ ಎಂದು ತಿಳಿಸಿದರು.

## "ನಮ್ಮದು ರೈತಪರ ಸರ್ಕಾರ-ಕಾಯ್ದೆಗಳು ಸಹ ರೈತಪರ"

ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):

ನಾನು ಮತ್ತೊಮ್ಮೆ ಸ್ಪಷ್ಟಪಡಿಸುತ್ತೇನೆ. ನಮ್ಮದು ರೈತಪರ ಸರ್ಕಾರ. ನಾವು ಯಾವುದೇ ತೀರ್ಮಾನ ತೆಗೆದುಕೊಂಡರೂ ಅದರಲ್ಲಿ ರೈತರ ಹಿತ ಅಡಗಿರುತ್ತದೆ. ಇದರಲ್ಲಿ ರಾಜ್ಯ ಸರ್ಕಾರ ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ಮಾಡಿರುವುದು ಮತ್ತು ಕೇಂದ್ರ ಸರ್ಕಾರ ಎಪಿಎಂಸಿ ಗೆ ಸಂಬಂಧಿಸಿದಂತೆ ನೂತನವಾಗಿ ಜಾರಿಗೆ ತಂದಿರುವ ಕಾಯ್ದೆಗಳು ಸಹ ಹೊರತಾಗಿಲ್ಲ ಎಂದು ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಅವರು ತಿಳಿಸಿದರು.

ಇವರು ಇಂದು ವಿಧಾನಸೌಧದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಈ ಕಾಯ್ದೆಗಳು ರೈತರ ಹಿತವನ್ನು ಕಾಪಾಡುವುದಲ್ಲದೆ, ಅವರ ಸ್ವಾಭಿಮಾನವನ್ನು ಎತ್ತಿ ಹಿಡಿಯುತ್ತದೆ. "ನನ್ನ ಬೆಳೆ, ನನ್ನ ಹಕ್ಕು" ಎಂದು ನಮ್ಮ ಅನ್ನದಾತ ಹೆಮ್ಮೆಯಿಂದ ಹೇಳಿಕೊಳ್ಳಲು ಸಹಕಾರಿಯಾಗಿದೆ. ಇದನ್ನು ಮುಂದುವರೆಸಿದಲ್ಲಿ " ನನ್ನ ಬೆಳೆ , ನನ್ನ ಬೆಲೆ " ಎಂಬ ಅಧಿಕಾರ ಸಹ ರೈತನಿಗೆ ಬರಲಿದೆ ಎಂದು ಹೇಳಿದ ಅವರು ಕಾಯಿದೆಗಳ ಕುರಿತು ಸಂಪೂರ್ಣ ವಿವರವನ್ನು ಮಾಧ್ಯಮಗಳೊಂದಿಗೆ ಹಂಚಿಕೊಂಡು ರೈತರಲ್ಲಿ ಈ ಕುರಿತು ಅರಿವು ಮೂಡಿಸುವಂತೆ ವಿನಂತಿಸಿಕೊಂಡರು.

ದಂಡ ಹಾಗೂ ಶಿಕ್ಷೆ ಇಲ್ಲ:

ಕೇಂದ್ರ ಸರ್ಕಾರದ ಕಾಯ್ದೆ ಪೂರ್ವದಲ್ಲಿ ಇದ್ದ ರಾಜ್ಯ ಸರ್ಕಾರದ ಎಪಿಎಂಸಿ ಕಾಯ್ದೆಯಡಿ ಉತ್ಪನ್ನಗಳ ವ್ಯಾಪಾರ ನಿಯಂತ್ರಣ ರಾಜ್ಯ ವ್ಯಾಪ್ತಿ ಇತ್ತು. ಅದರನ್ವಯ ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಎಪಿಎಂಸಿ ಪ್ರಾಂಗಣದಲ್ಲಿಯೇ ಮಾರುವುದು ಅನಿವಾರ್ಯವಿತ್ತು. ಪ್ರಾಂಗಣ ಹೊರಗಿ ಯಾವುದೇ ವ್ಯಾಪಾರಿ ಖರೀದಿಸಿದಲ್ಲಿ

ದಂಡ ಮತ್ತು ಕಾರಾವಾಸದ ಶಿಕ್ಷೆಗೆ ಗುರಿಯಾಗಬೇಕಿತ್ತು. ಪ್ರಸ್ತುತ ತಿದ್ದುಪಡಿಯಲ್ಲಿ ದಂಡ ಮತ್ತು ಶಿಕ್ಷೆ ವಿಧಿಸುವುದನ್ನು ಕೈಬಿಟಿರುವುದರಿಂದ ವ್ಯಾಪಾರಕ್ಕೆ ಮುಕ್ತ ಅವಕಾಶ ಕಲ್ಪಿಸಲಾಗಿದೆ.

ರಾಜ್ಯ/ಅಂತಾರಾಜ್ಯದಲ್ಲೂ ಮಾರಾಟಕ್ಕೆ ಅವಕಾಶ:

ತಿದ್ದುಪಡಿ ನಂತರದಲ್ಲಿ ರೈತರು ತಾವು ಬೆಳೆದ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆ ಪ್ರಾಂಗಣದಲ್ಲಿ ಅಥವಾ ರಾಜ್ಯದ ಯಾವುದೇ ಮೂಲೆಯಲ್ಲಿ ಬೇಕಿದ್ದರೂ ಮಾರಲು ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ. ಅಂತರ್ ಜಿಲ್ಲೆ ಮತ್ತು ರಾಜ್ಯಗಳಲ್ಲಿ ರೈತರು ನಿರ್ಧರಿಸಿದ ಬೆಲೆಗೆ ಮಾರಾಟ ಮಾಡಲು ಅವಕಾಶವನ್ನು ಮಾಡಿಕೊಡಲಾಗಿದೆ.

ಇದ್ದಲ್ಲಿಗೆ ಬಂದು ಖರೀದಿಗೆ ಅವಕಾಶ:

ರೈತ ಬಾಂಧವರು ಯಾವುದೇ ವ್ಯಾಪಾರಿಗಳಿಗೆ, ಯಾವುದೇ ಮಾರುಕಟ್ಟೆಗಳಲ್ಲಿ ಬೆಳೆಯನ್ನು ಮಾರಾಟ ಮಾಡಬಹುದು. ಇದಲ್ಲದೆ, ಬೇರೆ ರಾಜ್ಯಗಳಿಗೂ ತೆರಳಿ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವ ಅವಕಾಶವನ್ನು ಈಗ ಕಲ್ಪಿಸಲಾಗಿದೆ. ಇಲ್ಲವೆ, ವ್ಯಾಪಾರಿಗಳು ರಐತರ ಮನೆ ಬಾಗಿಲಿಗೆ ಇಲ್ಲವೇ ಹೊಲಗಳಿಗೆ ಬಂದು ಬೆಳೆಗಳನ್ನು ಖರೀದಿ ಮಾಡಬಹುದು.

ಹೆಚ್ಚಲಿದೆ ಸ್ಪರ್ಧೆ, ಏರಲಿದೆ ಬೆಲೆ:

ಯಾರಿಗೆ ಬೇಕಾದರೂ ಎಲ್ಲಿ ಬೇಕಾದರೂ ಬೆಳೆಯನ್ನು ಮಾರಾಟ ಮಾಡುವ ಹಕ್ಕನ್ನು ರೈತರಿಗೆ ನೀಡಿರುವ ಪರಿಣಾಮ ರೈತನಿಗೆ ಹೆಚ್ಚಿನ ಅವಕಾಶಗಳು ಸಿಗುವುದರೊಂದಿಗೆ ವ್ಯಾಪಾರಿಗಳ ಮಧ್ಯೆ ಸ್ಪರ್ಧೆ ಏರ್ಪಡುತ್ತದೆ. ಈ ಹಿನ್ನೆಲೆಯಲ್ಲಿ ಒಬ್ಬರಿಗೇ ಮಾರಾಟ ಮಾಡಬೇಕೆಂಬ ನಿಬಂಧನೆಗಳಿಲ್ಲದೆ, ಹೆಚ್ಚು ಬೆಲೆ ಕೊಟ್ಟು ಕೊಂಡುಕೊಳ್ಳುವವರಿಗೆ ಮಾರಾಟ ಮಾಡಿ ರೈತರು ಅಧಿಕ ಲಾಭವನ್ನು ಗಳಿಸಬಹುದು.

ಮುಕ್ತ ಮಾರುಕಟ್ಟೆ ಅವಕಾಶ:

ರೈತ–ಮಾರಾಟಗಾರರಿಗೆ ಈಗಾಗಲೇ ಇರುವ ವಿವಿಧ ಮಾರುಕಟ್ಟೆ ಚಾನಲ್‌ಗಳಾದ ಮಾರುಕಟ್ಟೆ ಪ್ರಾಂಗಣ, ನೇರ ಖರೀದಿ ಕೇಂದ್ರ, ಖಾಸಗಿ ಮಾರುಕಟ್ಟೆ ಪ್ರಾಂಗಣ, ರೈತ–ಗ್ರಾಹಕ ಮಾರುಕಟ್ಟೆ ಪ್ರಾಂಗಣ ವೇರ್‌ಹೌಸ್ ಇತ್ಯಾದಿಗಳೊಂದಿಗೆ ಈಗ ಮತ್ತೊಂದು ಉತ್ತಮ ಬದಲಿ(**alternative marketing channel** ) ಸೌಕರ್ಯ ಲಭ್ಯವಿರುವಂತಾಗಿದ್ದು, ಮುಕ್ತ ಮಾರುಕಟ್ಟೆ ದೊರೆತಂತಾಗಿದೆ.

ತಪ್ಪಲಿದೆ ಮಧ್ಯವರ್ತಿಗಳ ಹಾವಳಿ:

ರೈತರು ಈ ಹಿಮದೆ ತಮ್ಮ ಉತ್ಪನ್ನಗಳನ್ನು ತಮ್ಮದಲ್ಲದ ಸ್ಥಳಗಳಿಗೆ ಒಯ್ದು ಮಾರಾಟ ಮಾಡಲು ಅಧಿಕೃತ ದಾಖಲೆಗಳಾದ ಪಹಣಿ ಅಥವಾ ಸ್ಥಳೀಯ ರೆವಿನ್ಯೂ ಅಧಿಕಾರಿಗಳು ನೀಡುವ ಧೃಢೀಕರಣದೊಂದಿಗೆ ಅವಕಾಶ ಕಲ್ಪಿಸಲಾಗಿತ್ತು. ಪ್ರಸ್ತುತ ತಿದ್ದುಪಡಿಯಿಂದಾಗಿ ಯಾವುದೇ ದಾಖಲಾತಿಗಳಿಲ್ಲದೆ ತಮ್ಮ ಉತ್ಪನ್ನಗಳನ್ನು ಸಾಗಾಟ ಮಾಡಿ ಮಾರಾಟ ಮಾಡಲು ಅವಕಾಶ ಕಲ್ಪಿಸಿದೆ. ರಾಜ್ಯ ಸರ್ಕಾರ ರೈತರ ಆದಾಯವನ್ನು

ದ್ವಿಗುಣಗೊಳಿಸಲು ಮತ್ತು ರೈತರ ಸಾಗಾಣಿಕಾ ವೆಚ್ಚ ಹಾಗೂ ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಈ ಕ್ರಮ ವಹಿಸಿದೆ. ಇದರಿಂದ ರೈತರು ಆರ್ಥಿಕ ಶಕ್ತಿವಂತರಾಗುತ್ತಾರೆ.

ಎಪಿಎಂಸಿ ಮುಚ್ಚಲ್ಲ:

ನೂತನ ಎಪಿಎಂಸಿ ಕಾಯ್ದೆಯಿಂದ ಯಾರೂ ಆತಂಕ ಪಡಬೇಕಿಲ್ಲ. ಇದರಿಂದ ಈ ಹಿಂದಿನ ವ್ಯವಸ್ಥೆಗೆ ಯಾವುದೇ ಧಕ್ಕೆಯಾಗಿಲ್ಲ, ಅಲ್ಲದೆ, ಎಪಿಎಂಸಿಯನ್ನು ಮುಚ್ಚುವ ಯಾವುದೇ ಪ್ರಸ್ತಾಪ ರಾಜ್ಯ ಸರ್ಕಾರದ ಮುಂದೆ ಇಲ್ಲ.

ಕನಿಷ್ಟ ಬೆಂಬಲ ಬೆಲೆ ಮುಂದುವರಿಕೆ:

ಎಪಿಎಂಸಿ ಕಾಯ್ದೆ ಜಾರಿಯಿಂದ ಈ ಹಿಂದಿನ ಸೌಲಭ್ಯಗಳು ಇರುವುದಿಲ್ಲವೆಂಬ ಆತಂಕ ಯಾರಿಗೂ ಬೇಡ. ಯಾವುದೇ ಕೃಷಿ ಉತ್ಪನ್ನಗಳ ಬೆಲೆ ಕುಸಿತ ಉಂಟಾದಾಗ ಎಂದಿನಂತೆ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಖರೀದಿ ಪ್ರಕ್ರಿಯೆ ನಡೆಯುತ್ತದೆ. ಈ ಬಗ್ಗೆ ಸರ್ಕಾರ ಅಭಯ ನೀಡುತ್ತದೆ.

ಇದೇನು ಹೊಸತಲ್ಲ, ಯಾವುದೇ ತೊಂದರೆ ಆಗಲ್ಲ:

ಎಪಿಎಂಸಿ ಪ್ರಾಂಗಣ ವ್ಯಾಪಾರ ಮಾಡುವ ಜೊತೆಯಲ್ಲಿಯೇ 2007 ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ಮಾಡಿ ಎಪಿಎಂಸಿ ಪ್ರಾಂಗಣ ಹೊರಗೆ ರೈತರಿಂದ ನೇರ ಖರೀದಿಗೆ ಅವಕಾಶ ಕಲ್ಪಿಸಿ ನೇರ ಖರೀದಿ ಕೇಂದ್ರಗಳಲಿಗೆ ಲೈಸೆನ್ಸ್ ನೀಡಲಾಗಿದೆ. ಇದುವರೆವಿಗೂ 62 ಕಂಪನಿಗಳು ನೇರ ಖರೀದಿ ಲೈಸೆನ್ಸ್ ಪಡೆದು ಕಾರ್ಯನಿರ್ವಹಿಸುತ್ತಿವೆ. ಈಗಾಗಲೇ ಹಲವು ವರ್ಷಗಳಿಂದ ದೊಡ್ಡ ದೊಡ್ಡ ಕಂಪನಿಗಳು ಅಧಿಸೂಚಿತ ಕೃಷಿ ಉತ್ಪನ್ನಗಳಲ್ಲಿ ವ್ಯಾಪಾರ ಮಾಡುತ್ತಿದೆ. ತಿದ್ದುಪಡಿ ಏನೂ ಹೊಸತಲ್ಲ.

2014 ರಿಂದ ಆನ್‌ಲೈನ್ ಟ್ರೇಡಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಈ ಹಿಂದೆ ಆಗದ ತೊಂದರೆ ಈಗ ಹೇಗೆ ಆಗಲು ಸಾಧ್ಯ ಎಂಬುದು ನನ್ನ ಪ್ರಶ್ನೆಯಾಗಿದೆ.

ಇದು ರೈತ ಸ್ನೇಹಿ ಕಾಯ್ದೆ:

ಇನ್ನು ನಾನು ಕೊನೆಯದಾಗಿ ಹೇಳಬಯಸುವುದೇನೆಂದರೆ ಇಂತಹ ಒಂದು ಐತಿಹಾಸಿಕ ಕೃಷಿ ಕಾಯ್ದೆಯನ್ನು ನಮ್ಮ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಅವರು ಜಾರಿಗೊಳಿಸಿದ್ದಾರೆ. ಇದೊಂದು ರೈತಸ್ನೇಹಿ ಕಾಯ್ದೆಯಾಗಿದೆ ಎಂದು ಹೇಳಿದರು.

## “ಸಂಚಾರ ಸಂಪರ್ಕ ದಿನ”

ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):

ಬೆಂಗಳೂರು ನಗರ ಪೊಲೀಸ್ ಆಯುಕ್ತರು ಪ್ರತಿ ತಿಂಗಳ 2 ನೇ ಶನಿವಾರದಂದು ಬೆಳಿಗ್ಗೆ 11–00 ಗಂಟೆಯಿಂದ ಮಧ್ಯಾಹ್ನ 1–00 ಗಂಟೆಯವರೆಗೆ “ಸಂಚಾರ ಸಂಪರ್ಕ ದಿನ” ಎಂಬ ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ.

ರಸ್ತೆ ಬಳಕೆದಾರರು, ವಾಹನ ಸವಾರರು/ಚಾಲಕರು, ಪ್ರಯಾಣಿಕರು, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ ಕಮಿಟಿಯ ಸದಸ್ಯರು ಹಾಗೂ ವಾಣಿಜ್ಯ ಬಳಕೆದಾರರವರುಗಳನ್ನು ಬರಮಾಡಿಕೊಂಡು ಸಂಚಾರಕ್ಕೆ ಸಂಬಂಧಿಸಿದ ಸಲಹೆಗಳು ಮತ್ತು ಸಂಚಾರ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳುವ ಕುರಿತು ಸಮಾಲೋಚನೆ ನಡೆಸುವ ಬಗ್ಗೆ ಸೂಚಿಸಿರುತ್ತಾರೆ.

ಇದರ ಭಾಗವಾಗಿ ಡಿಸೆಂಬರ್ 12 ರಂದು ಬೆಂಗಳೂರು ನಗರದ ಎಲ್ಲಾ ಸಂಚಾರ ಪೊಲೀಸ್ ಠಾಣೆಗಳಲ್ಲಿ “ಸಂಚಾರ ಸಂಪರ್ಕ ದಿನ” ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿರುತ್ತದೆ. ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಸಂಚಾರಕ್ಕೆ ಸಂಬಂಧಿಸಿದ ಸಲಹೆಗಳು ಮತ್ತು ಸಮಸ್ಯೆಗಳ ಪರಿಹಾರದ ಬಗ್ಗೆ ಮುಕ್ತವಾಗಿ ಚರ್ಚಿಸಲು ಅವಕಾಶವನ್ನು ಕಲ್ಪಿಸಿದ್ದು ಇದರ ಸದ್ಬಳಕೆ ಮಾಡಿಕೊಳ್ಳಬಹುದಾಗಿದೆ.

ಕಮಲ್‌ಪಂತ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಅವರು ನಗರದ ವೈಟ್‌ಫೀಲ್ಡ್ ಸಂಚಾರ ಪೊಲೀಸ್ ಠಾಣೆಯಲ್ಲಿ ಬೆಳಿಗ್ಗೆ 11–00 ಗಂಟೆಯಿಂದ 12–00 ಗಂಟೆಯವರೆಗೆ ಸಾರ್ವಜನಿಕರ ಭೇಟಿ ಮತ್ತು ಸಂಚಾರ ಸಮಸ್ಯೆಗಳ ಕುರಿತು ಚರ್ಚೆಯನ್ನು ನಡೆಸಲಿದ್ದು, ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಸಂಚಾರಕ್ಕೆ ಸಂಬಂಧಿಸಿದ ಸಲಹೆಗಳು ಮತ್ತು ಸಮಸ್ಯೆಗಳ ಪರಿಹಾರದ ಬಗ್ಗೆ ಚರ್ಚೆಯನ್ನು ನಡೆಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಾರಿಗೆ ಇಲಾಖೆ ಖಾಸಗಿ ಬಸ್ಸುಗಳ / ಮ್ಯಾಕ್ಸಿಕ್ಯಾಬ್‌ಗಳ ವಿರುದ್ಧ ವಿಶೇಷ ಕಾರ್ಯಾಚರಣೆ

ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):

ಬೆಂಗಳೂರು ನಗರದಲ್ಲಿ ಕಾನೂನು ಉಲ್ಲಂಘನೆ ಮಾಡಿ ಸಂಚರಿಸುತ್ತಿರುವ ಪ್ರಯಾಣಿಕರನ್ನು ಸಾಗಿಸುವ ಖಾಸಗಿ ಬಸ್ಸುಗಳ / ಮ್ಯಾಕ್ಸಿಕ್ಯಾಬ್‌ಗಳ ವಿರುದ್ಧ ದಿನಾಂಕ:10.12.2020 ರಂದು ಸಾರಿಗೆ ಇಲಾಖೆಯು ವಿಶೇಷ ಕಾರ್ಯಾಚರಣೆ ಜರುಗಿಸಲಾಗಿರುತ್ತದೆ.

ಈ ಕಾರ್ಯಾಚರಣೆಯು ಬೆಂಗಳೂರು ನಗರದ ಹೆಬ್ಬಾಳ, ನಾಗಾವರ, ಇಂದಿನಾನಗರ, ಕೆ.ಆರ್.ಪುರಂ ಮತ್ತು ಗುರಗುಂಟೆಪಾಳ್ಯ ಇತ್ಯಾದಿ ಸ್ಥಳಗಳಲ್ಲಿ ನಡೆಸಲಾಗಿದ್ದು, ಕಾನೂನುಬಾಹಿರವಾಗಿ ಆಚರಣೆ ಮಾಡುತ್ತಿದ್ದ 40 ಬಸ್ಸುಗಳು, 60 ಮ್ಯಾಕ್ಸಿಕ್ಯಾಬ್‌ಗಳು ಹಾಗೂ ಸರಕು ಸಾಗಾಣಿಕೆ ವಾಹನಗಳಲ್ಲಿ ಪ್ರಯಾಣಿಕರನ್ನು ಸಾಗಿಸುತ್ತಿರುವ 151 ಒಟ್ಟು 251 ವಾಹನಗಳನ್ನು ವಶಕ್ಕೆ ಪಡಿಸಿಕೊಳ್ಳಲಾಗಿದ್ದು, ಅವುಗಳ ವಿರುದ್ಧ ಕಾನೂನು ರೀತಿ ಕ್ರಮಕೈಗೊಳ್ಳಲಾಗುತ್ತಿದೆ.

ಸರ್ಕಾರಕ್ಕೆ ಸಂದಾಯವಾಗಬೇಕಾದ ತೆರಿಗೆಯನ್ನು ಪಾವತಿಸದೇ ಸಂಚರಿಸುತ್ತಿರುವ ವಾಹನಗಳು ಮತ್ತು ರಹದಾರಿ ಇಲ್ಲದೆ ಸಂಚರಿಸುತ್ತಿರುವ ವಾಹನಗಳ ವಿರುದ್ಧ ಕ್ರಮಕೈಗೊಳ್ಳಲಾಗುತ್ತಿದೆ ಹಾಗೂ ವಾಹನಗಳನ್ನು ಜಪ್ತು ಮಾಡಿಕೊಂಡು ಕ್ರಮವಹಿಸಲಾಗುತ್ತಿದೆ ಎಂದು ಅಪರ ಸಾರಿಗೆ ಆಯುಕ್ತರು, (ಪ್ರವರ್ತನ) (ದಕ್ಷಿಣ), ಬೆಂಗಳೂರು ಕಚೇರಿ ಪ್ರಕಟಣೆ ತಿಳಿಸಿದೆ.

# ಸಚಿವರ ಪ್ರವಾಸ

ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):

ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ. ಗೋಪಾಲಯ್ಯ ಅವರು ಡಿಸೆಂಬರ್ 12ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಸಚಿವರ ಪ್ರವಾಸ

ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ಡಿಸೆಂಬರ್ 12 ರಂದು ಹುಬ್ಬಳ್ಳಿಗೆ ಪ್ರಯಾಣ ಬೆಳೆಸುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):**

ವಸತಿ ಸಚಿವ ವಿ. ಸೋಮಣ್ಣ ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡಿಸೆಂಬರ್ 13 ಮತ್ತು 14 ರಂದು ಪ್ರವಾಸ ಕೈಗೊಂಡು ಡಿಸೆಂಬರ್ 14 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಂಚೆ ಇಲಾಖೆ

## ಮನೆ ಬಾಗಿಲಿಗೆ ಶಬರಿಮಲೆ ಸ್ವಾಮಿ ಪ್ರಸಾದ

**ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):**

ಭಾರತ ಸರ್ಕಾರದ ಅಂಚೆ ಇಲಾಖೆ ಮನೆ ಬಾಗಿಲಿಗೆ ಶಬರಿಮಲೆ ಅಯ್ಯಪ್ಪಸ್ವಾಮಿ ಪ್ರಸಾದವನ್ನು ತಲುಪಿಸುವ ವ್ಯವಸ್ಥೆ ಮಾಡಿದೆ.

ಕೋವಿಡ್ –19 ರ ಹಿನ್ನೆಲೆಯಲ್ಲಿ ಶಬರಿಮಲೆಯಲ್ಲಿ ದರ್ಶನಕ್ಕೆ ಸೀಮಿತ ಅವಕಾಶವಿರುವ ಹಿನ್ನೆಲೆಯಲ್ಲಿ ಸ್ವಾಮಿ ಅಯ್ಯಪ್ಪ ಪ್ರಸಾದ ಅರವಣ, ತುಪ್ಪ, ಗಂಧದ ಪೇಸ್ಟ್, ವಿಭೂತಿ, ಹರಿಶಿಣ, ಕುಂಕುಮ ಪ್ರಸಾದವನ್ನು ಸ್ಪೀಡ್ ಪೋಸ್ಟ್ ಮೂಲಕ ತರಿಸಿಕೊಳ್ಳಬಹುದಾಗಿದೆ.

ಕರ್ನಾಟಕದ ಹತ್ತಿರದ ಯಾವುದೇ ಅಂಚೆ ಕಚೇರಿಯಲ್ಲಿ 450/– (ನಾಲ್ಕು ನೂರ ಐವತ್ತು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಬಹುದಾಗಿದೆ ಅಲ್ಲದೆ, ಭಾರತದ ಯಾವುದೇ ಪ್ರದೇಶದಿಂದ ಪ್ರಸಾದವನ್ನು ಪಡೆಯಬಹುದಾಗಿದೆ ಎಂದು ಅಂಚೆ ಇಲಾಖೆಯ ಪ್ರಕಟಣೆ ತಿಳಿಸಿದೆ.

### ರಾಜ್ಯದ 15 ಸ್ಥಳಗಳನ್ನು ಮತ್ಸ್ಯಧಾಮ ಎಂದು ಘೋಷಿಸಲು ಜೀವವೈವಿಧ್ಯ ಮಂಡಳಿ ಶಿಫಾರಸು

**ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):**

ಮಲೆನಾಡಿನಲ್ಲಿ ಹುಟ್ಟಿ ಹರಿಯುವ ಹಲವು ನದಿಗಳಲ್ಲಿ ಇರುವ ಅಪರೂಪದ ಮೀನು ವೈವಿಧ್ಯತೆ ಇರುವ ಸ್ಥಳಗಳನ್ನು ಗುರುತಿಸಲಾಗಿದ್ದು, ಅವುಗಳನ್ನು ಮೀನುಗಾರಿಕೆ ಕಾಯಿದೆ ಅಡಿಯಲ್ಲಿ ಮತ್ಸ್ಯಧಾಮ ಎಂದು ಘೋಷಿಸಬೇಕು ಎಂದು ಕರ್ನಾಟಕ ಜೀವವೈವಿಧ್ಯ ಮಂಡಳಿ ಸರ್ಕಾರಕ್ಕೆ ಶಿಫಾರಸು ಮಾಡಿದೆ.

2020 ಅಕ್ಟೋಬರ್ 22 ರಂದು ನಡೆದ ಜೀವವೈವಿಧ್ಯ ಮಂಡಳಿ ಸಭೆಯಲ್ಲಿ ಈ ಬಗ್ಗೆ ನಿರ್ಣಯ ಕೈಗೊಳ್ಳಲಾಗಿದೆ. ಇದೀಗ ಮೀನುಗಾರಿಕೆ ಸಚಿವ ಶ್ರೀನಿವಾಸ ಪೂಜಾರಿ ಅವರನ್ನು ಮಂಡಳಿ ಅಧ್ಯಕ್ಷ ಅನಂತ ಹೆಗಡೆ ಅಶೀಸರ ಅವರು ಭೇಟಿ ಮಾಡಿ ಶಿಫಾರಸ್ಸು ವಿವರ ನೀಡಿದರು.

ಶಿಫಾರಸ್ಸು ಸ್ವೀಕರಿಸಿ ಮಾತನಾಡಿದ ಮೀನುಗಾರಿಕಾ ಸಚಿವ ಶ್ರೀನಿವಾಸ ಪೂಜಾರಿ ಅವರು "ಮತ್ಸ್ಯಧಾಮಗಳ ಮೂಲಕ ಅಪರೂಪದ ಮೀನು ಸಂತತಿ ಸಂರಕ್ಷಣೆ ಸಾಧ್ಯವಾಗಿದೆ. ಇದು ಸಂತಸದ ಸಂಗತಿ. ಇನ್ನಷ್ಟು ಸ್ಥಳಗಳ ಬಗ್ಗೆ ಶಿಫಾರಸ್ಸು ಮಾಡಿರುವ ಜೀವವೈವಿಧ್ಯ ಮಂಡಳಿಗೆ ಅಭಿನಂದನೆ ಹೇಳುತ್ತೇನೆ. ಮೀನುಗಾರಿಕಾ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿ ಹೊಸ ಮತ್ಸ್ಯಧಾಮಗಳ ಘೋಷಣೆ ಆಗುವಂತೆ ಕ್ರಮಕೈಗೊಳ್ಳುತ್ತೇನೆ ಎಂದರು.

<u>**ವಿವರ:**</u> 2009 ರಲ್ಲಿಯೇ 11 ಸ್ಥಳ ಗುರುತಿಸಿ ಮತ್ಸ್ಯಧಾಮಎಂದು ಘೋಷಿಸಲಾಗಿದೆ. ನದಿ, ಹಳ್ಳಗಳಲ್ಲಿ ವಿನಾಶದ ಅಂಚಿನ ಮತ್ಸ್ಯ ಸಂತತಿ ಸಂರಕ್ಷಣೆಗೆ ಇದು ಸಹಾಯಕವಾಗಿದೆ. ಸ್ಥಳೀಯ ಧಾರ್ಮಿಕ ಸಂಸ್ಥೆ, ಜನತೆಯ ಸಹಕಾರದಿಂದ ಮತ್ಸ್ಯಧಾಮಗಳು, ವನ್ಯ ವೈವಿಧ್ಯ ತಾಣಗಳ ಸಂರಕ್ಷಣೆ ಸಾಧ್ಯವಾಗಿದೆ. ಇನ್ನೂ 15 ಸ್ಥಳಗಳನ್ನು ಗುರುತಿಸಲಾಗಿದ್ದು ಮತ್ಸ್ಯಧಾಮ ಘೋಷಣೆ ಮಾಡಲು ಶಿಫಾರಸಿನಲ್ಲಿ ತಿಳಿಸಲಾಗಿದೆ.

ಈ ಬಗ್ಗೆ ತಳಮಟ್ಟದ ಮಾಹಿತಿ ಪಡೆಯಲಾಗಿದೆ. ತಜ್ಞರು, ಮಿನುಗಾರಿಕಾ ಇಲಾಖೆ ನಿರ್ದೇಶಕರು, ಅಧಿಕಾರಿಗಳ ಜೊತೆ ಮಾತುಕತೆ ನಡೆಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ 8 ಸ್ಥಳಗಳಲ್ಲಿ ಉಡುಪಿಯ 1, ಉತ್ತರ ಕನ್ನಡ ಜಿಲ್ಲೆಯ 1, ಕೊಡಗು ಜಿಲ್ಲೆಯ 2, ಮಂಡ್ಯ ಜಿಲ್ಲೆಯ 2, ಕಲಬುರ್ಗಿಯ 1 ಸ್ಥಳವನ್ನು ಮತ್ಸ್ಯಧಾಮ ಎಂದು ಗುರುತಿಸಲಾಗಿದೆ. (ರಂಗನತಿಟ್ಟು, ಶಿಶಿಲ, ಕುಶಾಲನಗರ, ಸೀತಾನದಿ, ರಾಮನಗುಳಿ, ಅಡ್ಡಹೊಳೆ, ಪಾಕ ಮುಂತಾದ ಸ್ಥಳಗಳು)

ಈಗಾಗಲೇ ಶೃಂಗೇರಿ, ತೋಡಿಕಾನ, ಶಿವನ ಸಮುದ್ರ, ಹರಿಹರಪುರ, ತಿಂಗಳೆ, ರಾಮನಾತಪುರ ಮುಂತಾದ 11 ಸ್ಥಳಗಳಲ್ಲಿ ಮತ್ಸ್ಯಧಾಮ ಘೋಷಣೆ ಆಗಿದೆ

<u>**ಮತ್ಸ್ಯಧಾಮಗಳಲ್ಲಿರುವ ಅಪರೂಪದ ಮೀನು ಜಾತಿಯ ಹೆಸರು ಹೀಗಿದೆ:**</u> ಮಹಶೀರ್,ಹರಗಿ (ಹಲ್ಲುಗೆಂಡೆ),ಪರ್ಲಸ್ಪಾಟ್,ಪಫ್ಫರ್, ಸಾಲ್ಮೊಸ್ಟೋಮ್, ಗಾರ್, ಬೆರಿಲ್, ಸೆಟ್ನಾಯಿ ಬಾರ್ಬ, ಪುಂಟಿಯಸ್, ಡೇನಿಯೊ, ಗ್ಲಾಸ್ ಫಿಶ್, ಕಿಲ್ಲಿ ಫಿಶ್.

<u>**ಕರ್ನಾಟಕದಲ್ಲೇ ಮೊದಲು:**</u> ದೇಶದಲ್ಲಿ ಈ ರೀತಿ ಮತ್ಸ್ಯಧಾಮ ಘೋಷಣೆ ಮಾಡಿರುವ ಮೊದಲ ರಾಜ್ಯ ಕರ್ನಾಟಕ (2009) ಎಂಬ ಹೆಗ್ಗಳಿಕೆ ಇದೆ.

ಶಿಫಾರಸು ನೀಡಿಕೆ ಹಾಗೂ ಮತ್ಸ್ಯಧಾಮ ಫೋಟೋ ಲಗತ್ತಿಸಿದೆ. ಹಿಂದೆ ಘೋಷಿಸಿರುವ ಹಾಗೂ ಈಗ ಘೋಷಿಸಬೇಕಾಗಿರುವ ಮತ್ಸ್ಯಧಾಮಗಳ ಪಟ್ಟಿ ಜೊತೆಗೆ ಇದೆ.

**Karnataka State Pollution Control Board**
**Parisara Bhavan, Bengaluru**
**AQI of the CAAQM stations established in Bengaluru City**
**Date :11.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 88 | Satisfactory | $PM_{10}$ |
| 2 | Jayanagar 5th Block, Shalini ground | 78 | Satisfactory | $PM_{10}$ |
| 3 | KAVIKA, Mysore Road | 91 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 75 | Satisfactory | $PM_{10}$ |
| 5 | HSR Layout, near Central Silkboard | 47 | Good | $PM_{10}$ |
| 6 | City Railway Station, Magestic, Bengaluru | 67 | Satisfactory | CO |
| 7 | Saneguruvanahalli, Nisarga Bhavan, KSPCB, Shivanagara | 52 | Satisfactory | CO |
| 8 | BWSSB, Kadabesanahalli | 97 | Satisfactory | $PM_{2.5}$ |
| 9 | Peenya | 93 | Satisfactory | $O_3$ |
| 10 | BTM Layout | 55 | Satisfactory | $O_3$ |

| Category (Range) | Possible Health Impacts | Category (Range) | Possible Health Impacts |
|---|---|---|---|

| Good (0–50) | Minimal Impact | Poor (201–300) | Breathing discomfort to people on prolonged exposure |
|---|---|---|---|
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung,<br>Heart disease, children and older | Severe (>401) | Respiratory effects even on healthy people |

**ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**

**ಪರಿಸರ ಭವನ, ಬೆಂಗಳೂರು.**

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 11.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 88 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 78 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 91 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿ ಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 75 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್,<br>ಕೇಂದ್ರರೇಷ್ಮೆ ಮಂಡಳಿ ಹತ್ತಿರ | 47 | ಉತ್ತಮ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 67 | ತೃಪ್ತಿಕರ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 52 | ತೃಪ್ತಿಕರ | CO |
| 8 | BWSSB, ಕಾಡಬೀಸನಹಳ್ಳಿ | 97 | ತೃಪ್ತಿಕರ | $PM_{2.5}$ |
| 9 | ಪೀಣ್ಯ | 93 | ತೃಪ್ತಿಕರ | $O_3$ |

| | | | | |
|---|---|---|---|---|
| 10 | ಬಿಟಿಎಂ ಲೇಔಟ್ | 55 | ತೃಪ್ತಿಕರ | $O_3$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯ ಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## ಶಾಲೆ-ಪೋಷಕರ ಭಾವನಾತ್ಮಕ ನಂಬುಗೆ: ಶಾಲೆಗಳ ಪಾತ್ರ ನಿರ್ಣಾಯಕ- ಸುರೇಶ್ ಕುಮಾರ್

**ಬೆಂಗಳೂರು:** ಕೋವಿಡ್ ವಿಷಮ ಪರಿಸ್ಥಿತಿಯಿಂದಾಗಿ ಪೋಷಕರು ಮತ್ತು ಶಾಲೆಗಳ ನಡುವಿನ ಭಾವನಾತ್ಮಕ ನಂಬಿಕೆಯು ಹಿಂದೆಂದಿಗಿಂತಲೂ ಅಪಾಯದಲ್ಲಿದ್ದು, ಪ್ರಸ್ತುತ ಪರಿಸ್ಥಿತಿಯಲ್ಲಿ ನಮ್ಮ ಮಕ್ಕಳ ಹಿತದೃಷ್ಟಿಯಿಂದ ಈ ಅಂತರ ಮತ್ತು ಅಪನಂಬಿಕೆಯನ್ನು ನಿವಾರಿಸುವಲ್ಲಿ ಶಾಲೆಗಳ ಪಾತ್ರವು ಬಹಳ ನಿರ್ಣಾಯಕವಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಸಿಬಿಎಸ್ ಇ ಮತ್ತು ಬೆಂಗಳೂರು ಸಹೋದಯ ಸ್ಕೂಲ್ಸ್ ಕಾಂಪ್ಲೆಕ್ಸ್ ಅಸೋಸಿಯೇಷನ್ ಆಶ್ರಯದಲ್ಲಿ ಶುಕ್ರವಾರ ನಡೆದ 26ನೇ ವಾರ್ಷಿಕ ರಾಷ್ಟ್ರೀಯ ಸಹೋದಯ ಸ್ಕೂಲ್ಸ್ ಕಾನ್ಫರೆನ್ಸ್ ಇ-ಸಮ್ಮೇಳನದಲ್ಲಿ ಮಾತನಾಡಿದ ಅವರು, ಪೋಷಕರು ಮತ್ತು ಶಾಲೆಗಳ ನಡುವಿನ ಸಂಬಂಧ ಅತ್ಯಂತ ಪವಿತ್ರವಾದುದಾಗಿದ್ದು, ಇಬ್ಬರ ಉದ್ದೇಶವೂ ನಮ್ಮ ಮಕ್ಕಳ ಗಟ್ಟಿ ಬೆಳವಣಿಗೆಯೇ ಆಗಿರುವುದರಿಂದ ಈ ಭಾವನಾತ್ಮಕ ಸಂಬಂಧದ ಅಡಿಪಾಯ ಗಟ್ಟಿಯಾಗಿರಲೇಬೇಕು ಎಂದರು.

ಈ ಅಸಾಮಾನ್ಯ ಸಂದರ್ಭಗಳು ಅನೇಕ ಅಸಾಧಾರಣ ಪರಿಹಾರಗಳಿಗೆ ಕಾರಣವಾಗಿವೆ. ಅನೇಕ ಕಾರಣಗಳಿಗಾಗಿ ಪೋಷಕರು ವಿಚಲಿತರಾಗುವಂತಾಗಿದೆ. ಹಾಗಾಗಿ ಪೋಷಕರು ಮತ್ತು ಶಾಲೆಗಳ ನಡುವಿನ ಭಾವನಾತ್ಮಕ ನಂಬಿಕೆಯು ಹಿಂದೆಂದಿಗಿಂತಲೂ

ಅಪಾಯದಲ್ಲಿರುವಂತಾಗಿದೆ. ಮಕ್ಕಳು ಮತ್ತು ಪೋಷಕರ ದೃಷ್ಟಿಯಲ್ಲಿ ಶಾಲೆಯೆಂದರೆ ಅದು ಅವರ ಇನ್ನೊಂದು ಮನೆಯೇ ಹೌದು. ಹಾಗಾಗಿ ಪೋಷಕರು ಮತ್ತು ಶಾಲೆಯ ಸಂಬಂಧ ಸದಾ ಭಾವನಾತ್ಮಕವಾಗಿರುವುದು ಮಕ್ಕಳ ಹಿತದೃಷ್ಟಿಯಿಂದ ಆ ಮೂಲಕ ಸಮಾಜದ ಮತ್ತು ರಾಷ್ಟ್ರದ ಹಿತದೃಷ್ಟಿಗೆ ಪೂರಕ ಮತ್ತು ಕ್ಷೇಮಕರವಾದುದು ಎಂದು ಅವರು ಹೇಳಿದರು.

“ನಿಮ್ಮಲ್ಲಿ ಯಾರೂ, ನೀವು ಶಿಕ್ಷಕರಾಗಲು ಹೊರಟಾಗ, ತರಗತಿಯಿಲ್ಲದೆ, ನಿಮ್ಮ ಮುಂದೆ ಮಕ್ಕಳಿಲ್ಲದೆ ಬೋಧನೆ ಮಾಡುವ ಬಗ್ಗೆ ಎಂದಿಗೂ ಯೋಚಿಸಲಿಲ್ಲ ಎಂಬುದು ನನಗೆ ಖಾತ್ರಿಯಿದೆ. ಆದರೆ COVID-19 ಸಾಂಕ್ರಾಮಿಕವು ಅದನ್ನು ಬದಲಾಯಿಸಲು ನಮ್ಮನ್ನು ಒತ್ತಾಯಿಸಿದೆ. ವರ್ಚುವಲ್ ವೇದಿಕೆ ಮೂಲಕ ನಾನು ಈ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡುತ್ತಿರುವಾಗ ನಮ್ಮ ಮಕ್ಕಳನ್ನು ತಲುಪುವ ಈ ಹೊಸ ವಿಧಾನಕ್ಕೆ ನೀವೆಲ್ಲರೂ ಚೆನ್ನಾಗಿ ಹೊಂದಿಕೊಂಡಿರುವುದನ್ನು ನಾನು ಗಮನಿಸುತ್ತಿದ್ದೇನೆ. ಇದನ್ನು ಸಕಾರಗೊಳಿಸಿದ ನಿಮ್ಮೆಲ್ಲರಿಗೂ ಅಭಿನಂದನೆಗಳು” ಎಂದು ಸುರೇಶ್ ಕುಮಾರ್ ಶಿಕ್ಷಕರನ್ನುದ್ದೇಶಿಸಿ ಹೇಳಿದರು.

ಆನ್‌ಲೈನ್ ತರಗತಿಗಳು ನಮ್ಮ ಮಕ್ಕಳ ಬೌದ್ಧಿಕ ಸಾಮರ್ಥ್ಯಕ್ಕೆ ಅಡ್ಡಿಯಾಗಬಾರದು. ಗ್ಯಾಜೆಟ್‌ಗಳ ಮುಂದೆ ಹಲವು ಗಂಟೆಗಳ ಕಾಲ ಕುಳಿತುಕೊಳ್ಳುವಂತೆ ಒತ್ತಾಯಿಸುವುದರಿಂದ ಅವರ ಒಟ್ಟಾರೆ ಯೋಗಕ್ಷೇಮಕ್ಕೆ ಯಾವುದೇ ರೀತಿಯಲ್ಲೂ ಒಳ್ಳೆಯದಾಗುವುದಿಲ್ಲ. ಇದು ಶಾಲೆಯ ತರಗತಿ ಬೋಧನೆ ಮತ್ತು ಬೋಧನೆಯ ಪರ್ಯಾಯ ಮಾರ್ಗಗಳ ನಡುವಿನ ಅಂತರವನ್ನು ನಿವಾರಿಸಿ ಉತ್ತಮ ವಾತಾವರಣವನ್ನು ಖಾತರಿಪಡಿಸುವ ಜವಾಬ್ದಾರಿ ನಮ್ಮದಾಗಿದೆ ಎಂದು ಸಚಿವರು ಹೇಳಿದರು.

ಮಕ್ಕಳೇ ನಮ್ಮ ಮುಖ್ಯ ಪಾಲುದಾರರಾಗಿದ್ದಾರೆ ಎಂಬುದನ್ನು ನಾವು ಯಾವಾಗಲೂ ಮರೆಯಬಾರದು. ಸರ್ಕಾರವು ಅನೇಕ ಸವಾಲುಗಳಿಂದ ವಿಚಲಿತವಾಗಿದೆ. ಈ ಕೋವಿಡ್ ಸಾಂಕ್ರಾಮಿಕ ರೋಗದಿಂದ ಉದ್ಭವಿಸಿರುವ ಅನೇಕ ಸಾಮಾಜಿಕ-ಆರ್ಥಿಕ ಮತ್ತು ಸಾಂಸ್ಕೃತಿಕ ಸಮಸ್ಯೆಗಳನ್ನು ನಾವು ಪರಿಹರಿಸಬೇಕಾಗಿದೆ. ಶಿಕ್ಷಕರು, ಪೋಷಕರು ಮತ್ತು ಶಾಲೆ ಎಲ್ಲರೂ ನಮಗೆ ಸಮಾನವಾಗಿ ಮುಖ್ಯ. ಅದರೊಂದಿಗೆ ನಮ್ಮ ಮಕ್ಕಳ ಕಾಳಜಿ ಮುಖ್ಯವಾಗಬೇಕಿದೆ ಎಂಬುದನ್ನು ನಾವೆಲ್ಲರೂ ಅರಿಯಬೇಕಿದೆ ಎಂದು ಸುರೇಶ್ ಕುಮಾರ್ ಹೇಳಿದರು.

ಸರ್ಕಾರದ ನಿರ್ಧಾರಗಳು ವಿಶ್ವಾಸಾರ್ಹವಾಗಿದ್ದು, ಅದನ್ನು ಸರಿಯಾಗಿ ಅರ್ಥಮಾಡಿಕೊಂಡರೆ, ಅದು ಖಂಡಿತವಾಗಿಯೂ ಮಕ್ಕಳ ಯೋಗಕ್ಷೇಮಕ್ಕೆ ಪೂರಕವಾದ ಸಾಮರಸ್ಯದ ವಾತಾವರಣವನ್ನು ಸೃಷ್ಟಿಸಬಹುದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ನಮ್ಮ ಗೌರವಾನ್ವಿತ ಪ್ರಧಾನ ಮಂತ್ರಿಯವರ “ಏಕ್ ಭಾರತ್ ಶ್ರೇಷ್ಠ ಭಾರತ್” ಘೋಷಣೆಯನ್ನು ಆನಂದಿಸಬೇಕಾದ ಸಮಯವಿದು. ಹಾಗೆಯೇ ಈ ಸಮ್ಮೇಳನ ಹಾಗೆಯೇ ಇದು ನಮ್ಮ ವೈವಿಧ್ಯಮಯ ಶಕ್ತಿಗಳ ಸಂಭ್ರಮವಾಗಬೇಕಾಗಿದೆ. ವಿಶೇಷವಾಗಿ ಈ ಸಮಯದಲ್ಲಿ ನಾವೆಲ್ಲ ಒಗ್ಗಟ್ಟಿನಿಂದಿರಬೇಕಾದ ಅಗತ್ಯತೆ ಹೆಚ್ಚಾಗಿದೆ ಎಂಬುದನ್ನು ನಾವು ಮರೆಯಬಾರದು ಎಂದು ಸಚಿವರು ಹೇಳಿದರು. "ಪ್ರಜಾಪ್ರಭುತ್ವದ ಕಾರ್ಯವನ್ನು ಮಾಡಲು ನಿಜವಾಗಿಯೂ ಬೇಕಾಗಿರುವುದು ಸತ್ಯಗಳ ಜ್ಞಾನವಲ್ಲ ಸರಿಯಾದ ಶಿಕ್ಷಣ " ಎಂಬ ರಾಷ್ಟ್ರಪಿತ ಮಹಾತ್ಮಾ ಗಾಂಧಿಯವರ ಮಾತೊಂದನ್ನು ಉಲ್ಲೇಖಿಸಿದ ಅವರು, ಈ ಸಮ್ಮೇಳನದಲ್ಲಿ ಭಾಗಿಯಾದ ನೀವೆಲ್ಲರೂ ಇಲ್ಲಿಂದ ಅತ್ಯುತ್ತಮವಾದುದನ್ನೇ ಪಡೆದುಕೊಳ್ಳಲಿದ್ದೀರಿ. ಅದು ನಮ್ಮ ಮಕ್ಕಳ ಕಲಿಕೆಯ ದೃಷ್ಟಿಯಿಂದ ಶ್ರೇಯಸ್ಕರವಾದುದೇ ಆಗಿರುತ್ತದೆ ಎಂಬುದು ನನಗೆ ಖಾತ್ರಿ ಇದೆ ಎಂದರು.

ಈ ಬಿಕ್ಕಟ್ಟಿನ ಸಮಯದಲ್ಲಿ ಕೇಂದ್ರ ಶಿಕ್ಷಣ ಸಚಿವ ಶ್ರೀ ರಮೇಶ್ ಪೋಕ್ರಿಯಾಲ್ ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಶಾಶ್ವತ ಕೊಡುಗೆಗಳನ್ನು ಶ್ಲಾಘಿಸಿದ ಸುರೇಶ್ ಕುಮಾರ್, ಇದನ್ನು ಶಿಕ್ಷಣ ಕ್ಷೇತ್ರದ ಪಾಲುದಾರರಾದ ಯಾರೂ ಮರೆಯಬಾರದು. ಅವರು ಕೊಡಮಾಡಿದ ಹೊಸ ಶಿಕ್ಷಣ ನೀತಿಯು ಮುಂದಿನ ದಿನಗಳಲ್ಲಿ ಶಿಕ್ಷಣದ ಸಂಪೂರ್ಣ ಸನ್ನಿವೇಶವನ್ನು ರೂಪಿಸುತ್ತದೆ. ಅವರ ದೂರದೃಷ್ಟಿಯ ನಾಯಕತ್ವ ಖಂಡಿತವಾಗಿಯೂ ನಮ್ಮೆಲ್ಲರಿಗೂ ಪ್ರೇರಕ ಶಕ್ತಿಯಾಗಿದೆ ಎಂದರು.

ಸಮಾವೇಶವನ್ನು ಉದ್ಘಾಟಿಸಿದ ಕೇಂದ್ರ ಶಿಕ್ಷಣ ಸಚಿವ ರಮೇಶ್ ಪೋಕ್ರಿಯಾಲ್ ನಿಶಾಂಕ್ ಮಾತನಾಡಿ, ಎನ್.ಇ.ಪಿ ಯು ಭಾರತ ದೇಶದಲ್ಲಿ ಮಾತ್ರವಲ್ಲದೆ ಈಡೀ ವಿಶ್ವದ ಪ್ರಶಂಸೆಯನ್ನು ಪಡೆದಿದೆ. ಹಳ್ಳಿಯಿಂದ ಹಿಡಿದು ಸನ್ಮಾನ್ಯ ಪ್ರಧಾನ ಮಂತ್ರಿಯವರವರೆವಿಗೆ ಎನ್.ಇ.ಪಿ. ಯ ಬಗ್ಗೆ ಚರ್ಚೆ ನಡೆಯುತ್ತಿರುವುದು ಗಮನಾರ್ಹವಾದುದಾಗಿದೆ ಎಂದರು.

ನಾವು ದೇಶದ ಶಿಕ್ಷಣ ನೀತಿಯ ಪರಿಷ್ಕರಣೆಯಲ್ಲಿ ಬಹಳ ಸ್ಪಷ್ಟವಾಗಿದ್ದೇವೆ. ನಮ್ಮ ಶಿಕ್ಷಣ ನೀತಿಯೂ ಮಾನವೀಯತೆಯ ಬಗ್ಗೆ ಹೆಚ್ಚು ಗಮನ ನೀಡುವಂತಿರಬೇಕು, ನಮ್ಮ ಭಾರತಕ್ಕೆ ಮಾತ್ರ ಪ್ರತಿಯೊಬ್ಬರನ್ನು ಅದರಿಸುವ, ಅಂಗೀಕರಿಸುವ, ಸ್ವೀಕರಿಸುವ ಹಾಗೂ ಆದರಿಸುವ ಗುಣ ಹಾಗೂ ಸ್ಥೈರ್ಯವಿದೆ. ಭಾರತವು ಪ್ರಪಂಚಕ್ಕೆ ವಿಶ್ವ ಗುರುವಾಗಿದೆ. ನಮ್ಮ ಸಂಸ್ಕೃತಿಯಲ್ಲಿ ಹಿರಿಯರನ್ನು ಗೌರವಿಸುವ , ಪೂಜಿಸುವ ಶಿಕ್ಷಣ ಹೆಚ್ಚಾಗಿದ್ದು, ಅದು ನಮ್ಮ ಉದ್ದೇಶವಾಗಿರಬೇಕಾಗಿದೆ ಎಂದರು.

ಇಡೀ ಪ್ರಪಂಚಕ್ಕೆ ಶಿಕ್ಷಣ ಹೇಳಿಕೊಟ್ಟ ದೇಶ ನಮ್ಮದು. ನಾವು ನಮ್ಮ ಪೂರ್ವ ಕಾಲದ ವಿಶ್ವವಿದ್ಯಾನಿಲಯಗಳಾದ ತಕ್ಷಶಿಲಾ, ಮಗದ, ನಳಂದಾದಂತಹ ವಿಶ್ವವಿದ್ಯಾನಿಲಯಗಳ ಕೊಡುಗೆಯನ್ನು ಮರೆಯಬಾರದು ಎಂದರು. ಪ್ರಪಂಚದಲ್ಲಿ ನಾವು ಯಾರಿಗೂ ಹಿಂದೆ ಬಿದ್ದಿಲ್ಲ. ಆರ್ಯಭಟ, ಕೌಟಿಲ್ಯ, ನಾಗಾರ್ಜುನ, ಭಾಸ್ಕರ, ಚರಕರಂತಹ ಔಷಧಿ, ಶಿಕ್ಷಣ, ಅರ್ಥಶಾಸ್ತ್ರ, ಗಣಿತ, ಬಾಹ್ಯಕಾಶ ಶಾಸ್ತ್ರಗಳು ಸೇರಿದಂತೆ ಸರ್ವರೀತಿಯ ಜ್ಞಾನ ಪಡೆದ ಮೇಧಾವಿಗಳು ಜನ್ಮ ತಾಳಿದ ನಾಡು ನಮ್ಮದು ಎಂಬುದು ನಮಗೆಲ್ಲ ಹೆಮ್ಮೆಯಾಗಿದ್ದು, ಅದರ ಬೆಳಕಿನಲ್ಲಿ ನಾವು ನಮ್ಮ ಜ್ಞಾನಕ್ಷಿತಿಜವನ್ನು ಇನ್ನಷ್ಟು ಎತ್ತರಕ್ಕೆ ಬೆಳೆಸಿಕೊಳ್ಳಬೇಕಿದೆ ಎಂದು ಪೋಕ್ರಿಯಾಲ್ ನಿಶಾಂಕ್ ಹೇಳಿದರು.

ಶಿಕ್ಷಣ ಕ್ಷೇತ್ರದಲ್ಲಿ ಕರ್ನಾಟಕ ರಾಜ್ಯದ ಪ್ರಗತಿ ಮತ್ತು ಕೊಡುಗೆಯನ್ನು ಶ್ಲಾಘಿಸಿದ ಅವರು, ಶಿಕ್ಷಣ ಸಚಿವ ಸುರೇಶ್ ಕುಮಾರ್ ಉಲ್ಲೇಖಿಸಿದ ಮಹಾತ್ಮಾಗಾಂಧಿಯವರ ಉವಾಚವನ್ನು ಮತ್ತೊಮ್ಮೆ ಪ್ರಸ್ತಾಪಿಸಿ, ಮಹಾತ್ಮಾಗಾಂಧಿಯವರ ಸ್ಪೂರ್ತಿಯನ್ವಯ ಎನ್.ಇ.ಪಿ. ಯನ್ನು ರೂಪಿಸಿರುವುದರ ಬಗ್ಗೆ ನೀವು ಹೇಳಿರುವುದು ಪ್ರಶಂಸನೀಯ. ಈ ಸಂದರ್ಭದಲ್ಲಿ ಇಲ್ಲಿನ ನಿಮ್ಮ ಪ್ರತಿಯೊಂದು ಟಿಪ್ಪಣಿಯು ಒಪ್ಪುವಂತಹದಾಗಿದ್ದು, ಅದಕ್ಕೆ ನನ್ನ ಪೂರ್ಣ ಸಹಮತವಿದೆ ಎಂದು ಹೇಳಿದರು.

ಸಮ್ಮೇಳನದಲ್ಲಿ ರಾಷ್ಟ್ರಮಟ್ಟ ಶಿಕ್ಷಣ ತಜ್ಞರು, ಶಿಕ್ಷಣ ಪ್ರೇಮಿಗಳು, ಕೇಂದ್ರಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಕೇಂದ್ರದ ಹಿರಿಯ ಅಧಿಕಾರಿಗಳು, ಎನ್ ಸಿ ಇ ಆರ್ ಟಿ ಅಧಿಕಾರಿಗಳು, ಕೇಂದ್ರೀಯ ವಿದ್ಯಾಲಯದ ಅಧಿಕಾರಿಗಳು, ಬಯೋಕಾನ್ ಅಧ್ಯಕ್ಷೆ ಶ್ರೀಮತಿ ಕಿರಣ್ ಮಜುಂದಾರ್ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿದ್ದರು.

## ಜವಾಹರ್ ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆ 2021ಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):**

**ಜವಾಹರ್ ನವೋದಯ ವಿದ್ಯಾಲಯವು 2021-22 ನೇ ಸಾಲಿನ 6 ನೇ ತರಗತಿಯ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಯನ್ನು ದಿನಾಂಕ 10-4-2020 ರ ಶನಿವಾರ ಬೆಂಗಳೂರಿನ ಆಯ್ದ ಕೇಂದ್ರಗಳಲ್ಲಿ ನಡೆಸಲಾಗುವುದು. ಈ ಪ್ರವೇಶ ಪರೀಕ್ಷೆಗೆ ಮಾನ್ಯತೆ ಪಡೆದ ಶಾಲೆಯಲ್ಲಿ 2020-21 ನೇ ಸಾಲಿನಲ್ಲಿ 5 ನೇ ತರಗತಿಯಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಓದುತ್ತಿರುವ ಮಕ್ಕಳು ಅರ್ಹರಾಗಿರುತ್ತಾರೆ.**

**ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ವಿವರಣಾ ಪತ್ರ ಮತ್ತು ಮುಖ್ಯೋಪಾಧ್ಯಾಯರ ಧೃಢೀಕರಣ ಪತ್ರವನ್ನು ನವೋದಯ ಸಮಿತಿಯ ವೆಬ್‌ಸೈಟ್ www.navodaya.gov.in ಅಥವಾ https://navodaya.gov.in/nvs/enAdmission-JNVST/JNVST-class ನಿಂದ ಪಡೆದುಕೊಳ್ಳಬಹುದು. ಮುಖ್ಯೋಪಾಧ್ಯಾಯರ ಧೃಢೀಕರಣ ಪತ್ರದೊಂದಿಗೆ ಪಾಲಕರು ಅರ್ಜಿಯನ್ನು ಅನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಆನ್‌ಲೈನ್ ಮೂಲಕ ಭರ್ತಿ ಮಾಡಲು ಕೊನೆಯ ದಿನಾಂಕ 15-12-2020 ಆಗಿರುತ್ತದೆ.**

**ಹೆಚ್ಚಿನ ಮಾಹಿತಿ ಸಮಿತಿಯ ವೆಬ್‌ಸೈಟ್ www.navodaya.gov.in ಅಥವಾ ವಿದ್ಯಾಲಯದ ದೂರವಾಣಿ ಸಂಖ್ಯೆ ಗೆ ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## Jawahar Navodaya Vidyala Selection Test-2020

**Bengaluru, December 11 (Karnataka Information)**

**The JNVST 2021 for admission to class VI for the academic year 2021-22 in Jawahar Navodaya Vidyalaya scheduled to be held on 10th April 2021 at 11-15 am. The students who are studying in**

**Class V for the academic year 2020-21 in Bengaluru Urban District are eligible to appear for Exam.**

**The candidates have enrolled the applications through ONLINE and upload the duly filled in Certificate from the Head Master of school where the candidate is studying in Class V at the time of registration that can be downloaded from the NVS website : www.navodaya.gov.in or https;//navodaya.gov.in/nvs/en/Admission-JNVST-class. The last date for submission of Appliation form through online is 15th December 2020 for JNV Seleciton Test, 2021. For more information visit to Samiti website:www.navodaya.gov.inor contact Vidyalaya Phone No. 8746985884.**

## ‘ಸಕಾಲ ಸಪ್ತಾಹ’

**ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):**

ರಾಜ್ಯದ ನಾಗರಿಕರಿಗೆ ನಿಗದಿತ ಕಾಲಮಿತಿಯಲ್ಲಿ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಜಾರಿಗೆ ತಂದಿರುವ ಸಕಾಲ ಯೋಜನೆಯಡಿಯಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆವಿಕಂ) ಯು ಸಹ ತನ್ನ ಗ್ರಾಹಕರಿಗೆ ಒಂಬತ್ತು ಸೇವೆಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರೈಸುತ್ತಿದೆ. ಗ್ರಾಹಕರಲ್ಲಿ ಜಾಗೃತಿ ಮೂಡಿಸಲು ಹಾಗೂ ಸೇವೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸಕಾಲ ಮಿಷನ್ ನೀಡಿರುವ ನಿರ್ದೇಶನದಂತೆ ಬೆವಿಕಂ ತನ್ನ ವ್ಯಾಪ್ತಿಯಲ್ಲಿ ದಿನಾಂಕ 14.12.2020 ರಿಂದ 19.12.2020 ರವರೆಗೆ ‘ಸಕಾಲ ಸಪ್ತಾಹ’ ವನ್ನು ಆಚರಿಸಲಿದೆ.

‘ಸಕಾಲ ಸಪ್ತಾಹ’ ದ ಅಂಗವಾಗಿ ಬೆವಿಕಂ ಒದಗಿಸುವ ಸಕಾಲ ಸೇವೆಗಳು, ಅವುಗಳನ್ನು ಪಡೆಯಲು ಸಂಪರ್ಕಿಸಬೇಕಾದ ಕಛೇರಿ, ಹೆಸರಿಸಲಾದ ಅಧಿಕಾರಿಗಳು, ಸಕ್ಷಮ ಅಧಿಕಾರಿ, ಮೇಲ್ಮನವಿ ಪ್ರಾಧಿಕಾರ ಮತ್ತು ಪ್ರತಿಯೊಂದು ಸೇವೆಯನ್ನು ಒದಗಿಸಲು ನಿಗದಿಪಡಿಸಿರುವ ಕಾಲಮಿತಿಯ ಬಗ್ಗೆ ವಿದ್ಯುತ್ ಬಳಕೆಯ ಗ್ರಾಹಕರಲ್ಲಿ ಅರಿವು ಮೂಡಿಸಲು ಉದ್ದೇಶಿಸಿದೆ. ಗ್ರಾಹಕರು ಸಕಾಲ ಯೋಜನೆಯಡಿ ಬರುವ ಸೇವೆಗಳನ್ನು ಪಡೆಯಲು ತಮ್ಮ ವ್ಯಾಪ್ತಿಗೆ ಬರುವ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿಯನ್ನು ಸಂಪರ್ಕಿಸ ಪ್ರಕಟಣೆ ತಿಳಿಸಿದೆ.

## **‘SAKALA SAPTAHA’**

## **Bengaluru, December 11 (Karnataka Information)**

**The Bangalore Electricity Supply Company (BESCOM) under the SAKALA Services Programme is providing nine of its services to its consumers with in the stipulated time. As per the directives issued by DPAR-Sakala Mission, BESCOM is observing ‘SAKALA SAPTAHA’ from 14.12.2020 to 19.12.2020 in all its offices.**

**As part of SAKALA SAPTAHA, BESCOM intends to bring awareness among consumers on the services available under SAKALA, details of contact office, Designated officers, Competent authority, Appellate authority and time limit prescribed to each of its SAKALA services. Consumers are requested to contact the office of Assistant Executive Engineer of their respective areas to avail of the prescribed services under SAKALA programme.**

## ಆಸ್ಪತ್ರೆಗಳಲ್ಲಿ ಕೋವಿಡ್ ಚಿಕಿತ್ಸೆಗೆ ಅಗತ್ಯ ಸಿದ್ಧತೆ: ಔಷಧಿಗೆ ಹೆಚ್ಚು ದರ ವಿಧಿಸಿದರೆ ಕ್ರಮ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್

**ಬೆಂಗಳೂರು, ಡಿಸೆಂಬರ್ 11 (ಕರ್ನಾಟಕ ವಾರ್ತೆ):**

ಕೋವಿಡ್ ಸಂಭಾವ್ಯ 2 ನೇ ಅಲೆಗೆ ಸಿದ್ಧತೆಯಾಗಿ 10 ಜಿಲ್ಲಾಸ್ಪತ್ರೆ, 30 ತಾಲೂಕು ಆಸ್ಪತ್ರೆಗಳಲ್ಲಿ ಆಕ್ಸಿಜನ್ ಜನರೇಟರ್ ಉಪಕರಣಗಳನ್ನು ಖರೀದಿಸಲು 37.72 ಕೋಟಿ ರೂ.ಗೆ ಅನುಮೋದನೆ ನೀಡಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ತಿಳಿಸಿದರು.

ವಿಧಾನಸೌಧದಲ್ಲಿ ಕೋವಿಡ್ ಟಾಸ್ಕ್ ಫೋರ್ಸ್ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಟಾಸ್ಕ್ ಫೋರ್ಸ್ ನ ಹೊಸ ಅಧ್ಯಕ್ಷರಾಗಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರನ್ನು ನಿಯೋಜಿಸಿದ್ದು, ಮುಂದಿನ ಮೂರು ತಿಂಗಳಲ್ಲಿ ಕೋವಿಡ್ ನಿಯಂತ್ರಿಸುವ ಬಗ್ಗೆ ಚರ್ಚೆಯಾಗಿದೆ. 90 ದಿನಗಳಲ್ಲಿ ಕೋವಿಡ್ ಪರೀಕ್ಷೆ ಮಾಡಲು 11.32 ಕೋಟಿ ರೂ. ವೆಚ್ಚದಲ್ಲಿ 10 ಲಕ್ಷ ಹೊಸ ರಾಪಿಡ್ ಆಂಟಿಜೆನ್ ಕಿಟ್ ಖರೀದಿ, 22.50 ಕೋಟಿ ರೂ. ವೆಚ್ಚದಲ್ಲಿ ಔಷಧಿ ಖರೀದಿಗೆ ಮಂಜೂರು ನೀಡಲಾಗಿದೆ ಎಂದು ತಿಳಿಸಲಾಗಿದೆ.

ರೆಮಿಡಿಸ್ವಿರ್ ಔಷಧಿ 1,800 ರೂ.ಗೆ ಸರ್ಕಾರಕ್ಕೆ ದೊರೆಯುತ್ತಿದೆ. ಕೆಲ ಖಾಸಗಿ ಆಸ್ಪತ್ರೆಗಳು ಈ ಔಷಧಿಗೆ ಹೆಚ್ಚು ದರ ವಿಧಿಸುತ್ತಿರುವ ಬಗ್ಗೆ ದೂರು ಬಂದಿದೆ. 2 ಸಾವಿರ ರೂ.ಗಿಂತ ಹೆಚ್ಚಿನ ದರ ವಿಧಿಸಿದರೆ ಕೆಪಿಎಂಇ ಕಾಯ್ದೆ ಪ್ರಕಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

*10 ಜಿಲ್ಲೆಗಳ ಸಭೆ*

ಇದೇ ವೇಳೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬಳ್ಳಾರಿ ಸೇರಿದಂತೆ 10 ಜಿಲ್ಲೆಗಳಲ್ಲಿ ಕೋವಿಡ್ ನಿಯಂತ್ರಣ ಸಂಬಂಧ ಸಚಿವ ಡಾ.ಕೆ.ಸುಧಾಕರ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.

ಈ ಕುರಿತು ಮಾಹಿತಿ ನೀಡಿದ ಸಚಿವರು, ಕೋವಿಡ್ 2 ನೇ ಅಲೆಯನ್ನು ಪರಿಗಣಿಸಿ, 10 ಜಿಲ್ಲೆಗಳಲ್ಲಿ ಕೋವಿಡ್ ಪರೀಕ್ಷೆಗೆ ಗುರಿ ನಿಗದಿಪಡಿಸಲಾಗಿದೆ. ಈ ತಿಂಗಳು ಹಾಗೂ ಮುಂದಿನ ತಿಂಗಳಲ್ಲಿ ಸಭೆ, ಸಮಾರಂಭ, ಹೊಸ ವರ್ಷಾಚರಣೆಗೆ ಕಡಿವಾಣ ಹಾಕಲು ಸೂಚಿಸಲಾಗಿದೆ. ಡಿಸೆಂಬರ್ 20 ರಿಂದ ಜನವರಿ ಎರಡನೇ ವಾರದವರೆಗೂ ಧಾರ್ಮಿಕ, ಸಾಮಾಜಿಕ ಸಮಾರಂಭಗಳಲ್ಲಿ ಅತಿ ಕಡಿಮೆ ಜನರು ಸೇರಬೇಕು ಎಂದು ಸೂಚಿಸಲಾಗಿದೆ ಎಂದು ತಿಳಿಸಿದರು.

ಲಸಿಕೆ ವಿತರಣೆಗೆ ಸಿದ್ಧತೆಯಾಗಿ ಹೊಸ ಆ್ಯಪ್ ಅಭಿವೃದ್ಧಿಪಡಿಸಲಾಗಿದೆ. ಇದರಲ್ಲಿ ಲಸಿಕೆ ಸಂಗ್ರಹ, ವಿತರಣೆಗೆ ಮಾಡಿಕೊಂಡ ಸಿದ್ಧತೆ ಬಗ್ಗೆ ಮಾಹಿತಿ ಅಪ್ ಲೋಡ್ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ವಿವರಿಸಿದರು.

*ಶೋಕವೇ ಹೊರತು ಸಂಭ್ರಮವಲ್ಲ*

*ಹೊಸ ವರ್ಷದಲ್ಲಿ ಶೋಕಾಚರಣೆ ಮಾಡಬೇಕಿದೆಯೇ ಹೊರತು ಸಂಭ್ರಮಾಚರಣೆ ಅಲ್ಲ. ಅನೇಕರು ಜೀವ ಕಳೆದುಕೊಂಡಿದ್ದಾರೆ. ಮತ್ತೆ ಕೆಲವರು ಉದ್ಯೋಗ ಕಳೆದುಕೊಂಡಿದ್ದಾರೆ. ಭಾರತೀಯರಿಗೆ ಯುಗಾದಿ ಹೊಸ ವರ್ಷ ಎಂದು ಸಚಿವ ಡಾ.ಕೆ.ಸುಧಾಕರ್ ಹೇಳಿದರು. ಕಂದಾಯ ಸಚಿವ ಆರ್.ಅಶೋಕ್, ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಉಪಸ್ಥಿತರಿದ್ದರು.